ಹೊಸದಿಗಂತ 16/2/2018

### ಫೆ.24ಕ್ಕೆ ವಿಜಯ ವಿಕ್ರಮ ಕಂಬಳ | ಉಪ್ಪಿನಂಗಡಿ ಕ್ಷೇತ್ರದಲ್ಲಿ ಆಮಂತ್ರಣ ಹಂಚಿಕೆ

# ಕಂಬಳ ಆಮಂತ್ರಣ ವಿತರಣೆಗೆ ಚಾಲನೆ



**ಉಪ್ಪಿನಂಗಡಿ:** ಕಂಬಳವನ್ನು ನಿಷೇಧಿಸಲು ಮಧ್ಯಂತರ ಆದೇಶ ನೀಡಬೇಕೆಂದು ಆಗ್ರಹಿಸಿ, ಪೇಟಾದವರು ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್‌ನ ನ್ಯಾಯಪೀಠವು, ಕಂಬಳಕ್ಕೆ ತಡೆಯೊಡ್ಡಲು ನಿರಾಕರಿಸಿದೆ. ಕಂಬಳ ಕೂಟದಲ್ಲಿ ಪ್ರಾಣಿ ಹಿಂಸೆ ನಡೆಯುತ್ತಿಲ್ಲ ಎಂಬುದು ಸುಪ್ರೀಂಕೋರ್ಟ್‌ಗೂ ಮನವರಿಕೆ ಆಗಿದೆ. ಕಂಬಳ ಕ್ರೀಡೆಗೆ ಅವಕಾಶ ನೀಡಲೆಂದು ಪ್ರಾಣಿಗಳ ಮೇಲಿನ ಹಿಂಸೆ (ಕರ್ನಾಟಕ ತಿದ್ದುಪಡಿ) ಮಸೂದೆಯನ್ನು ರಾಜ್ಯ ಸರಕಾರ ಅಂಗೀಕರಿಸಿದ್ದು, ಇದಕ್ಕೆ ಇನ್ನು ಕೆಲವೇ ದಿನಗಳಲ್ಲಿ ರಾಷ್ಟ್ರಪತಿಗಳ ಅಂಕಿತ ಬೀಳಲಿದೆ. ಆ ಬಳಿಕ ಕಂಬಳ ಕ್ರೀಡೆ ನಿರಾತಂಕವಾಗಿ ಗತ ವೈಭವದೊಂದಿಗೆ ಮುಂದುವರೆಯಲಿದೆ ಎಂದು ಕಂಬಳ ಪರ ಕಾನೂನು ಹೋರಾಟಗಾರ, ಉಪ್ಪಿನಂಗಡಿ ವಿಜಯ-ವಿಕ್ರಮ ಜೋಡುಕೆರೆ ಕಂಬಳ ಸಮಿತಿ ಅಧ್ಯಕ್ಷ ಅಶೋಕ್ ಕುಮಾರ್ ರೈ ಕೋಡಿಂಬಾಡಿ ನುಡಿದರು.

ಅವರು ಫೆ. 24ರಂದು ಉಪ್ಪಿನಂಗಡಿಯಲ್ಲಿ ನಡೆಯಲಿರುವ ವಿಜಯ ವಿಕ್ರಮ ಜೋಡು ಕರೆ ಕಂಬಳದ ಬಗ್ಗೆ ಉಪ್ಪಿನಂಗಡಿ ಪೇಟೆಯಲ್ಲಿ ಆಮಂತ್ರಣ ಪತ್ರ ವಿತರಣಾ ಕಾರ್ಯಕ್ರಮಕ್ಕೆ ಶ್ರೀ ಸಹಸ್ರಲಿಂಗೇಶ್ವರ ಮಹಾಕಾಳಿ ದೇವಾಲಯದ ವಠಾರದಲ್ಲಿ ಅಧಿಕೃತ ಚಾಲನೆ ನೀಡಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡುತ್ತಿದ್ದರು.

ತುಳುನಾಡಿನ ಪ್ರಾಚೀನ ಜನಪದ ಕ್ರೀಡೆಯೂ, ಧಾರ್ಮಿಕ ಆರಾಧನೆಯೂ ಆಗಿರುವ ಕಂಬಳವನ್ನು ಉಳಿಸಿ ಬೆಳೆಸಲು ಯಾವ ರೀತಿಯ ಹೋರಾಟಕ್ಕೂ ಸಿದ್ಧರಿದ್ದು, ಸುಪ್ರೀಂಕೋರ್ಟ್ ಕಂಬಳಕ್ಕೆ ಅವಕಾಶ ಕಲ್ಪಿಸಿರುವುದು ರಾಜ್ಯಕ್ಕೆ ಸಂದ ಜಯ. ಉಪ್ಪಿನಂಗಡಿಯಲ್ಲಿ ಈ ಬಾರಿಯ ವಿಜಯ-ವಿಕ್ರಮ ಕಂಬಳವು ಫೆ.24 ಮತ್ತು 25ರಂದು ಅದ್ದೂರಿಯಾಗಿ ನಡೆಯಲಿದ್ದು, ಇದು ಕಂಬಳದ ಅಂತಿಮ ವಿಜಯಕ್ಕೆ ನಾಂದಿಯಾಗಲಿ ಎಂದ ಅವರು, ಆ ಮೇಲೆಯೂ ಪೇಟಾದವರು ಅಡ್ಡಿ ಪಡಿಸಿದರೆ ಅದರ ವಿರುದ್ಧ ಹೋರಾಟ ನಡೆಸುತ್ತೇವೆ. ಕಾನೂನು ಸಮರದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ಯಾವುದೇ ಅಡೆತಡೆಗಳು ಬಂದರೂ ಕಂಬಳ ಉಳಿಸುವ ನಿಟ್ಟಿನಲ್ಲಿ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಜಾತಿ, ಧರ್ಮ, ರಾಜಕೀಯ ಬೇಧ ಮರೆತು ಹೋರಾಟ ನಡೆಸುತ್ತೇವೆ ಎಂದರು.

ಉಪ್ಪಿನಂಗಡಿಯ ಕಂಬಳವು ವಿಜೃಂಭಣೆಯಿಂದ ನಡೆಯಲಿದ್ದು, ಬಿಜೆಪಿ ರಾಜ್ಯಾಧ್ಯಕ್ಷ ಯಡಿಯೂರಪ್ಪ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಅಲ್ಲದೇ, ಸಂಸದ ನಳಿನ್ ಕುಮಾರ್ ಕಟೀಲ್, ಶೋಭಾ ಕರಂದ್ಲಾಜೆ, ಶಾಸಕಿ ಶಕುಂತಳಾ ಟಿ. ಶೆಟ್ಟಿ, ಸಹಕಾರ ಮಹಾ ಮಂಡಲದ ರಾಜ್ಯಾಧ್ಯಕ್ಷ ಡಾ. ಎಂ.ಎನ್. ರಾಜೇಂದ್ರಕುಮಾರ್, ಕ್ಯಾಂಪ್ಕೋ ಅಧ್ಯಕ್ಷ ಎಸ್.ಆರ್. ಸತೀಶ್ಚಂದ್ರ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ. ವಿಶೇಷವಾಗಿ ಈ ಬಾರಿ ವಿಜಯ-ವಿಕ್ರಮ ಕಂಬಳದ ಸಂದರ್ಭ ಎಲ್ಲಾ ಕಂಬಳಾಭಿಮಾನಿಗಳಿಗೆ ಅನ್ನಸಂತರ್ಪಣೆ ಮಾಡಲಾಗಿದೆ ಎಂದರು. ಉಪ್ಪಿನಂಗಡಿ ಶ್ರೀ ಸಹಸ್ರಲಿಂಗೇಶ್ವರ-ಮಹಾಕಾಳಿ ದೇವಸ್ಥಾನದ ವ್ಯವಸ್ಥಾಪನಾ ಸಮಿತಿ ಸದಸ್ಯ ಪ್ರಕಾಶ್ ರೈ ಬೆಳ್ಳಿಪ್ಪಾಡಿ ಅವರಿಗೆ ಆಮಂತ್ರಣ ಪತ್ರಿಕೆ ನೀಡುವ ಮೂಲಕ ಆಮಂತ್ರಣ ಪತ್ರಿಕೆ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಬಳಿಕ ದೇವಾಲಯದ ವಠಾರದಿಂದ ಕೊಂಬು, ವಾಲಗದೊಂದಿಗೆ ಮೆರವಣಿಗೆಯಲ್ಲಿ ಬಸ್ ನಿಲ್ದಾಣ, ಬ್ಯಾಂಕ್ ರಸ್ತೆ ಮೂಲಕ ಗಾಂಧಿಪಾರ್ಕ್ ಆಗಿ ಬೈಪಾಸ್ ರಸ್ತೆಯಾಗಿ ಬಂದು ಪೇಟೆಯಿಡೀ ಕಂಬಳದ ಆಮಂತ್ರಣ ಪತ್ರಿಕೆ ನೀಡಲಾಯಿತು.

ಈ ಸಂದರ್ಭ ವಿಜಯ-ವಿಕ್ರಮ ಜೋಡುಕೆರೆ ಕಂಬಳ ಸಮಿತಿ ಗೌರವಾಧ್ಯಕ್ಷ ಎನ್. ಉಮೇಶ್ ಶೆಣೈ, ಪ್ರಧಾನ ಕಾರ್ಯದರ್ಶಿ ಕೇಶವ ಭಂಡಾರಿ ಬೆಳ್ಳಿಪ್ಪಾಡಿ ಕೈಪ, ಕೋಶಾಧಿಕಾರಿ ಸೀತಾರಾಮ ಶೆಟ್ಟಿ ಹೆಗ್ಡೆ ಹಿತ್ಲು, ಕಾರ್ಯದರ್ಶಿ ಚಂದ್ರಶೇಖರ ಮಡಿವಾಳ, ಉಪಾಧ್ಯಕ್ಷ ರಾಮಚಂದ್ರ ಮಣಿಯಾಣಿ, ವಿವಿಧ ಸಮಿತಿ ಪದಾಧಿಕಾರಿಗಳಾದ ಕೃಷ್ಣಪ್ರಸಾದ್ ಬೊಳ್ಳಾವು, ಕಂಗ್ವೆ ವಿಶ್ವನಾಥ ಶೆಟ್ಟಿ, ಸುರೇಶ್ ಅತ್ರಮಜಲು, ಯೋಗೀಶ್ ಸಾಮಾನಿ ಸಂಪಿಗೆದಡಿ, ಅನಿಲ್ ಕುಮಾರ್, ದಿಲೀಪ್ ಶೆಟ್ಟಿ, ಹರಿಪ್ರಸಾದ್ ಶೆಟ್ಟಿ ಬೊಳ್ಳಾವು, ಆದರ್ಶ ಶೆಟ್ಟಿ ಕಜೆಕ್ಕಾರ್, ರಮೇಶ್ ಭಂಡಾರಿ, ಹರೀಶ್ಚಂದ್ರ ಆಚಾರ್ಯ, ರಾಜಗೋಪಾಲ್ ಹೆಗ್ಡೆ ರವಿ ಮರಿಕೆ ಮತ್ತಿತರರು ಉಪಸ್ಥಿತರಿದ್ದರು.